ಯೋಜನೆಗೆ ಸರ್ಕಾರವು ದಿನಾಂಕ: 22–08–2007ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಕಾಮಗಾರಿಗಳು ಪ್ರಗತಿಯಲ್ಲಿವೆ.

788 ಶ್ರೀ ಬೆಳ್ಳುಳ್ಳಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪೂರ ಜಿಲ್ಲೆಯ ಬಸವನಬಾಗೇವಾಡಿ ಮತಕ್ಷೇತ್ರದ ಕೂಡ್ಲಿಗಿಯಲ್ಲಿ ನಿರ್ಮಾಣವಾಗಲಿರುವ 4000 ಮೆಗಾವ್ಯಾಟ್ ಉತ್ಪಾದನಾ ಕೇಂದ್ರವನ್ನು ಸ್ಥಾಪಿಸಲು ಅನುವು ಮಾಡಿಕೊಟ್ಟಿರುವ ಪ್ರಯುಕ್ತ ಬಸವನಬಾಗೇವಾಡಿ ತಾಲ್ಲೂಕಿಗೆ ನಿರಂತರ 3 ಫೇಸ್ ವಿದ್ಯುತ್ ಕೊಡುವುದಕ್ಕೆ (ನಿರಂತರ 24 ಗಂಟೆಗಳ) ಸರ್ಕಾರ ಚಿಂತಿಸಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?

ಇ) ವಿಜಾಪೂರ ಜಿಲ್ಲೆಯ, ಮುದ್ದೇಬಿಹಾಳ ಹಾಗೂ ಬಸವನ ಬಾಗೇವಾಡಿ ತಾಲ್ಲೂಕುಗಳಿಗೆ ಸಂಬಂಧಪಟ್ಟಂತೆ ಬಸವನಬಾಗೇವಾಡಿಯಲ್ಲಿ ವಿಭಾಗೀಯ ಕಛೇರಿ, ಕೆ.ಪಿ.ಟಿ.ಸಿ.ಎಲ್. ಹಾಗೂ ಕೊಲ್ಲಾರ ಗ್ರಾಮದಲ್ಲಿ ಉಪ ವಿಭಾಗ ಕೆ.ಪಿ.ಟಿ.ಸಿ.ಎಲ್. ಕಾರ್ಯಾಲಯ ಸ್ಥಾಪಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ?

ಈ) ಹಾಗಿದ್ದಲ್ಲಿ, ಕೆ.ಪಿ.ಟಿ.ಸಿ.ಎಲ್. ಕಾರ್ಯಾಲಯ ಸ್ಥಾಪಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :

ಅ) ಮತ್ತು ಆ) ವಿಷಯವು ಪರಿಶೀಲನಾ ಹಂತದಲ್ಲಿದೆ.

ಇ) ಕೆ.ಪಿ.ಟಿ.ಸಿ.ಎಲ್. ಈಗ ಒಂದು ವಿದ್ಯುತ್ ಪ್ರಸರಣ ಸಂಸ್ಥೆ ಮಾತ್ರ ಆಗಿದ್ದು, ವಿದ್ಯುತ್ ವಿತರಣೆಯ ಜವಾಬ್ದಾರಿಯನ್ನು ವಿದ್ಯುತ್ ಸರಬರಾಜು ಕಂಪನಿಗಳು ನಿರ್ವಹಿಸುತ್ತಿವೆ. ಬಿಜಾಪುರ ಜಿಲ್ಲೆಯು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ (ಹೆಸ್ಕಾಂ) ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಬಿಜಾಪುರ ಜಿಲ್ಲೆಯ, ಮುದ್ದೇಬಿಹಾಳ ಹಾಗೂ ಬಸವನಬಾಗೇವಾಡಿ ತಾಲ್ಲೂಕುಗಳಿಗೆ ಸಂಬಂಧಪಟ್ಟಂತೆ ಬಸವನಬಾಗೇವಾಡಿಯಲ್ಲಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ವಿಭಾಗೀಯ ಕಛೇರಿ ಹಾಗೂ ಕೊಲ್ಲಾರ ಗ್ರಾಮದಲ್ಲಿ ಉಪ ವಿಭಾಗ ಕಾರ್ಯಾಲಯ ಸ್ಥಾಪಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.

ಈ) ಉದ್ಭವಿಸುವುದಿಲ್ಲ.